ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಗ್ರಾಮ ಪಂಚಾಯಿತಿಯನ್ನು ಟೌನ್ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸುವುದು

147 (390) ಶ್ರೀ ಸುರೇಶ್‌ಗೌಡ (ನಾಗಮಂಗಲ): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನ ಬೆಳ್ಳೂರು ಹೋಬಳಿ, ಬೆಳ್ಳೂರು ಗ್ರಾಮ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಆ) ಹಾಗಿದ್ದಲ್ಲಿ, ಬೆಳ್ಳೂರು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿವೇಚನಾ ಕೋಟಾದಡಿ ನಿವೇಶನ ಹಂಚಿಕೆ

148 (391) ಸುರೇಶ್‌ಗೌಡ (ನಾಗಮಂಗಲ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಗೃಹ ಮಂಡಳಿಯಿಂದ 2008ರಿಂದ ಈವರೆವಿಗೆ ರಾಜ್ಯದಲ್ಲಿ ಯಾವ ಸ್ಥಳಗಳಲ್ಲಿ ನಿವೇಶನ ಅಭಿವೃದ್ಧಿಪಡಿಸಲಾಗಿದೆ; (ವಿವರ ಒದಗಿಸುವುದು)